# ಸಂಸ್ಕೃತಿ ಉಳಿಸಿಕೊಂಡೇ ಆಧುನಿಕತೆಗೆ ತೆರೆದುಕೊಳ್ಳಿ

ಬೆಂಗಳೂರು: ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತವು ಅದ್ಭುತ ಸಾಧನೆ ಮಾಡುತ್ತಿದೆ. ಆಧುನಿಕತೆ ಮತ್ತು ವೈಚಾರಿಕತೆ ಅಳವಡಿಸಿಕೊಳ್ಳುತ್ತಿದೆ. ನಮ್ಮ ಸಂಸ್ಕೃತಿಯ ಬೇರುಗಳನ್ನು ಉಳಿಸಿಕೊಂಡೇ ಆಧುನಿಕತೆಗೆ ತೆರೆದುಕೊಳ್ಳಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಗರದ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ ಓಪನ್ ಹಾರ್ಟ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಧುನಿಕತೆ ಎನ್ನುವುದು



ಮೇಲೆ ಕಾಣುವ ಮರದಂತೆ. ಸಂಸ್ಕೃತಿ, ಪರಂಪರೆ ಎನ್ನುವುದು ಭೂಮಿಯಾಳಕ್ಕೆ ಇಳಿದ ಬೇರುಗಳಂತೆ. ಬೇರು ಗಟ್ಟಿಯಾಗಿದ್ದಾಗ ಎಂಥ ಗಾಳಿ ಬಂದರೂ ಮರ ಬೀಳುವುದಿಲ್ಲ. ಅದೇ ರೀತಿ ನಮ್ಮ ಸಂಸ್ಕೃತಿಯ ಬೇರುಗಳನ್ನು ಗಟ್ಟಿಮಾಡಿಕೊಂಡೇ ನೀವು ಆಧುನಿಕರಾಗಿ ಎಂದರು.

ಹೆಲಿಕಾಪ್ಟರ್‌ಗಳನ್ನು, ವಿಮಾನಗಳನ್ನು ನಾವೇ ತಯಾರಿಸುತ್ತಿದ್ದೇವೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ಅಗಾಧ ಪ್ರಗತಿ ಸಾಧಿಸಿದ್ದೇವೆ. ಚಂದ್ರನ ದಕ್ಷಿಣ ಧ್ರುವದಲ್ಲಿ ಗಗನನೌಕೆ ಇಳಿಸಿದ ಮೊದಲ ದೇಶ ನಮ್ಮದು. ಚಂದ್ರನ ಮೇಲೆ ಯಶಸ್ವಿಯಾಗಿ ಇಳಿದ ಕೆಲವೇ ರಾಷ್ಟ್ರಗಳಲ್ಲಿ ಭಾರತವೂ ಒಂದು ಎಂಬ ಹಿರಿಮೆ ನಮ್ಮದು. ಚಂದ್ರಯಾನ–3 ಮತ್ತು ಆದಿತ್ಯ ಎಲ್–1 ಮಿಷನ್‌ನಿಂದಾಗಿ ಭಾರತದ ಚಿತ್ರಣವೇ ಬದಲಾಯಿತು. ಜಿ–20 ಶೃಂಗಸಭೆಯ ಆತಿಥ್ಯ ವಹಿಸುವ ಅವಕಾಶವೂ ಭಾರತಕ್ಕೆ ದೊರಕಿತು ಎಂದು ನುಡಿದರು.